ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ತಾಂತ್ರಿಕ ಶಿಕ್ಷಣ ಇಲಾಖೆಯ ನಡವಳಿಗಳು

**ವಿಷಯ** ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸಂಸ್ಥೆಗಳಲ್ಲಿನ ಉಳಿದ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿಯಿರುವ ಕಾರ್ಯಾಗಾರ ವಿಭಾಗದ ಮೆಕ್ಯಾನಿಕ್(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ) ಮುಂಬಡ್ತಿ ಹುದ್ದೆಗಳನ್ನು ಹೆಲ್ಪರ್(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ) ವೃಂದದಿಂದ ಮುಂಬಡ್ತಿ ಮೂಲಕ ತುಂಬುವ ಬಗ್ಗೆ.

**ಉಲ್ಲೇಖ**
1. ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಸೂಚನೆ ಸಂಖ್ಯೆ:DTE-ADMIOEST(4)/4/2024, ದಿನಾಂಕ: 11.03.2024 ರಲ್ಲಿ ದಿನಾಂಕ: 31.12.2023 ರಲ್ಲಿ ಪ್ರಕಟಿಸಲಾಗಿರುವ ಹೆಲ್ಪರ್ ವೃಂದದ ಅಂತಿಮ ಜ್ಯೇಷ್ಠತಾ ಪಟ್ಟಿ.
2. ದಿನಾಂಕ: 05.08.2024 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳ ಮೇರೆಗೆ
3. ದಿನಾಂಕ: 27.08.2024 ರಂದು ನಡೆದ ಸ್ಥಳನಿಯುಕ್ತಿ ಕೌನ್ಸಲಿಂಗ್ ಮೇರೆಗೆ.

*****

ಪ್ರಸ್ತಾವನೆ:-

ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕಾರ್ಯಾಗಾರ ವಿಭಾಗದಲ್ಲಿನ ವಿವಿಧ ವಿಭಾಗಗಳ ಮೆಕ್ಯಾನಿಕ್ ಹುದ್ದೆಗಳನ್ನು ಆಯಾ ವಿಭಾಗದ ಹೆಲ್ಪರ್ ಹುದ್ದೆಯಿಂದ ಶೇಕಡ 50 ರಷ್ಟು ಮುಂಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ(1) ರಂತೆ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಹೆಲ್ಪರ್(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ) ವೃಂದದ ಅಂತಿಮ ಜ್ಯೇಷ್ಠತಾ ಪಟ್ಟಿಯ ಅನುಸಾರ ಕಾರ್ಯಾಗಾರ ವಿಭಾಗದ ಮೆಕ್ಯಾನಿಕ್(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ) ವೃಂದದಲ್ಲಿ ಖಾಲಿಯಿರುವ ಮುಂಬಡ್ತಿ ಹುದ್ದೆಗಳನ್ನು ತುಂಬಬೇಕಾಗಿರುತ್ತದೆ. ಈ ಸಂಬಂಧ ಉಲ್ಲೇಖ(2) ರಂತೆ ದಿನಾಂಕ: 05.08.2024 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿಯಿರುವ ಮೆಕ್ಯಾನಿಕ್(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ) ಮುಂಬಡ್ತಿ ಹುದ್ದೆಗಳನ್ನು ಜೇಷ್ಠತೆ, ಅರ್ಹತೆ, ಮೀಸಲಾತಿ ನಿಯಮಗಳನ್ವಯ ಆಯಾ ವಿಭಾಗದ ಅರ್ಹ ಹೆಲ್ಪರ್(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ) ಸಿಬ್ಬಂದಿಗಳಿಗೆ ಮುಂಬಡ್ತಿ ನೀಡಲು ತೀರ್ಮಾನಿಸಿ, ಸದರಿ ಅರ್ಹ ಹೆಲ್ಪರ್ ಸಿಬ್ಬಂದಿಗಳಿಗೆ ಮುಂಬಡ್ತಿ ನೀಡಲು ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಯಲ್ಲಿ ಶಿಫಾರಸ್ಸು ಮಾಡಲಾಗಿರುತ್ತದೆ.

ಉಲ್ಲೇಖ(3) ರಲ್ಲಿ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನ ಹಾಗೂ ಶಿಫಾರಸ್ಸಿನಂತೆ ಹೆಲ್ಪರ್(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ) ವೃಂದದಿಂದ ಮೆಕ್ಯಾನಿಕ್(ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ) ವೃಂದಕ್ಕೆ ಬಡ್ತಿ ಹೊಂದಲು ಅರ್ಹರಿರುವ ಹೆಲ್ಪರ್ ಸಿಬ್ಬಂದಿಗಳಿಗೆ ಮುಂಬಡ್ತಿ ಹುದ್ದೆಗೆ ಕೌನ್ಸಲಿಂಗ್ ಮುಖಾಂತರ ಸ್ಥಳನಿಯುಕ್ತಿಗೊಳಿಸಲು ದಿನಾಂಕ: 27.08.2024 ರಂದು ನಡೆದ ಕೌನ್ಸಲಿಂಗ್‌ನಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿತ್ತು. ಅದರಂತೆ, ಇಲಾಖಾ ಮುಂಬಡ್ತಿ ಸಮಿತಿ ಸಭೆಯ ಶಿಫಾರಸ್ಸಿನಂತೆ ಅರ್ಹ ಸಿಬ್ಬಂದಿಗಳಿಗೆ ಮೆಕ್ಯಾನಿಕ್ ಹುದ್ದೆಗೆ ಮುಂಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: DTE-ADMIOEST(4)/16/2021** 818 **ದಿನಾಂಕ: 27.08.2024**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ಹೆಲ್ಪರ್ ಸಿಬ್ಬಂದಿಗಳಿಗೆ ಗ್ರೂಪ್-ಸಿ ವೃಂದದ 2024 ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿ ರೂ. 34100-800-35700-900-39300-1000-43300-1125-47800-1250-52800-1375-58300-1500-64300-1650-67600 ರಲ್ಲಿನ ಮೆಕ್ಯಾನಿಕ್ ಹುದ್ದೆಗೆ ಮುಂಬಡ್ತಿ ನೀಡಿ ಅವರ ಹೆಸರಿನ ಮುಂದೆ ಸೂಚಿಸಿರುವ ಖಾಲಿ ಹುದ್ದೆಗೆ ಎದುರಾಗಿ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

| ಕ್ರ. ಸಂ. | ಹೆಲ್ಪರ್ ಸಿಬ್ಬಂದಿಗಳ ಹೆಸರು ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಸಂಸ್ಥೆಯ ಹೆಸರು | ವಿಭಾಗ | ಮೆಕ್ಯಾನಿಕ್ ಹುದ್ದೆಗೆ ಮುಂಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಲಾದ ಸಂಸ್ಥೆ | ಷರಾ |
|---|---|---|---|---|
| 1. | ಕುಮಾರಪ್ಪ ಬಿ.ಸಿ.<br>ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು | ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ | ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು | |
| 2. | ಇಮಾಮ್ ಹುಸೇನ್ ತಹಶೀಲ್ದಾರ್<br>ಸರ್ಕಾರಿ ಪಾಲಿಟೆಕ್ನಿಕ್, ಹುಬ್ಬಳ್ಳಿ | ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ | ಸರ್ಕಾರಿ ಪಾಲಿಟೆಕ್ನಿಕ್, ಹುಬ್ಬಳ್ಳಿ | |
| 3. | ಮಖ್‌ಸೂದ್<br>ಸರ್ಕಾರಿ ಪಾಲಿಟೆಕ್ನಿಕ್, ಬೀದರ್ | ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ | ಸರ್ಕಾರಿ ಪಾಲಿಟೆಕ್ನಿಕ್, ಬೀದರ್ | ಸ್ಥಳೀಯ ವೃಂದ |
| 4. | ಈಶ್ವರ್ ಕೆ.<br>ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು | ಆಟೋ ಹೆಲ್ಪರ್ | ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು | |
| 5. | ದೇವೇಂದ್ರಪ್ಪ<br>ಡಿ.ಆರ್.ಆರ್. ಸರ್ಕಾರಿ ಪಾಲಿಟೆಕ್ನಿಕ್, ದಾವಣಗೆರೆ | ಆಟೋ ಡ್ರೈವರ್ | ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು | |
| 6. | ಕುಮಾರಸ್ವಾಮಿ ಹೆಚ್.<br>ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು | ಸಿವಿಲ್ | ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು | |

| | | | | |
|---|---|---|---|---|
| 7. | ಕೆ.ನಾಗರಾಜ<br>ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್,<br>ಬೆಂಗಳೂರು | ಎಲೆಕ್ಟ್ರಿಕಲ್ | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್,<br>ಬೆಂಗಳೂರು | |
| 8. | ವಸಂತಕುಮಾರ್ ಎಸ್.<br>ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ,<br>ಬೆಂಗಳೂರು | ಟೆಕ್ಸ್‌ಟೈಲ್ಸ್ | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ.<br>ಸಂಸ್ಥೆ, ಬೆಂಗಳೂರು | |
| 9. | ಸುರೇಶ್ ಆರ್.<br>ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್,<br>ಬೆಂಗಳೂರು | ವಿಜ್ಞಾನ | ಸರ್ಕಾರಿ ಪಾಲಿಟೆಕ್ನಿಕ್,<br>ಚಾಮರಾಜನಗರ | |
| 10. | ರಮೇಶ್‌ಬಾಬು ಎನ್<br>ಸರ್ಕಾರಿ ಗಣಿ ಶಿಕ್ಷಣ ಶಾಲೆ,<br>ಕೆ.ಜಿ.ಎಫ್. | ಮೆಕ್ಯಾನಿಕಲ್<br>ಇಂಜಿನಿಯರಿಂಗ್ ಮತ್ತು<br>ಸಂಯೋಜಿತ ವಿಭಾಗ | ಸರ್ಕಾರಿ ಗಣಿ ಶಿಕ್ಷಣ ಶಾಲೆ,<br>ಕೆ.ಜಿ.ಎಫ್. | |
| 11. | ಶ್ರೀನಿವಾಸ್ ಜಿ.<br>ಸರ್ಕಾರಿ ಗಣಿ ಶಿಕ್ಷಣ ಶಾಲೆ,<br>ಕೆ.ಜಿ.ಎಫ್. | ಮೆಕ್ಯಾನಿಕಲ್<br>ಇಂಜಿನಿಯರಿಂಗ್ ಮತ್ತು<br>ಸಂಯೋಜಿತ ವಿಭಾಗ | ಸರ್ಕಾರಿ ಗಣಿ ಶಿಕ್ಷಣ ಶಾಲೆ,<br>ಕೆ.ಜಿ.ಎಫ್. | |

ಮುಂಬಡ್ತಿ ಹೊಂದಿರುವ ಹೆಲ್ಪರ್ ಸಿಬ್ಬಂದಿಗಳು ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಿಂದ ಪಡೆದು ಸ್ಥಳನಿಯುಕ್ತಿಗೊಳಿಸಲಾದ ಸಂಸ್ಥೆಯಲ್ಲಿ ಈ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಬಡ್ತಿಯು ಸ್ವಯಂಚಾಲಿತವಾಗಿ ರದ್ದಾಗುತ್ತದೆ. ಬಡ್ತಿ ಹೊಂದಿರುವ ಹೆಲ್ಪರ್ ಸಿಬ್ಬಂದಿಗಳ ಪೈಕಿ ಯಾರಾದರೂ ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದೆ.

ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

27/8/24

ಇವರಿಗೆ:-

1. ಸಂಬಂಧಪಟ್ಟ ಹೆಲ್ಪರ್ ಸಿಬ್ಬಂದಿಗಳಿಗೆ(ಸಂಬಂಧಿಸಿದ ಪ್ರಾಂಶುಪಾಲರ ಮೂಲಕ);
2. ಸಂಬಂಧಪಟ್ಟ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ - ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ;
3. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ;
4. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).

ಪ್ರತಿ:-

1. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಆಪ್ತ ಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
3. ಶಾಖಾ ರಕ್ಷಾ ಕಡತ.